**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಅಡಗೂರು ಹೆಚ್.ವಿಶ್ವನಾಥ್ ರವರು ನಿಯಮ 72ರಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ**

**ಪ್ರಶ್ನೆ** **ಕ್ರಿಮಿನಲ್ ಆರೋಪ ಎದುರಿಸುತ್ತಿರುವ ವ್ಯಕ್ತಿ ಮಾನ್ಯ ಮುಖ್ಯಮಂತ್ರಿಗಳ ಪದಗ್ರಹಣ ಪ್ರಮಾಣ ವಚನ ಸ್ವೀಕಾರ ಸಮಾರಂಭದ, ಮಾನ್ಯ ಗೌರವಾನ್ವಿತ ರಾಜ್ಯಪಾಲರು ಪ್ರಮಾಣ ವಚನ ಬೋಧಿಸುವ ವೇದಿಕೆಯಲ್ಲಿ ಗಣ್ಯಾತಿಗಣ್ಯರು ಆಸೀನರಾಗಿದ್ದು, ಭದ್ರತೆ, ಶಿಷ್ಟಾಚಾರವನ್ನು ಹಾಗೂ ಕಾನೂನನ್ನು ಉಲ್ಲಂಘಿಸಿ ವೇದಿಕೆ ಮೇಲೆ ಕಾಣಿಸಿಕೊಂಡಿರುವ ಆರೋಪ ಕುರಿತು, ನಿಯಮಾನುಸಾರ ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ದಿನಾಂಕ: 30.05.2023ರಲ್ಲಿ ಮಾನ್ಯ ರಾಜ್ಯಪಾಲರ ಕಛೇರಿಯ ಪತ್ರದಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಗೆ ತಿಳಿಸಿದ್ದು, ಈ ಕುರಿತು ಸರ್ಕಾರದಿಂದ ಯಾವ ರೀತಿ ಪರಿಶೀಲಿಸಲಾಗಿದೆ ಹಾಗೂ ಕೈಗೊಂಡಿರುವ ಕ್ರಮದ ಕುರಿತು.**

**ಉತ್ತರ:** ಮಾನ್ಯ ಮುಖ್ಯಮಂತ್ರಿಗಳ ಪದಗ್ರಹಣ ವೇದಿಕೆಯಲ್ಲಿ ಕಾನೂನು ಉಲ್ಲಂಘನೆ ಮಾಡಿ, ಭದ್ರತಾ ಲೋಪವೆಸಗಿ ಶ್ರೀ ಬಿ.ಎಸ್.ಶಿವಣ್ಣ ಎಂಬುವರು ಕಾಣಿಸಿಕೊಂಡಿರುವ ಕುರಿತು ನೀಡಿರುವ ದೂರಿನ ಮೇರೆಗೆ ಪೋಲಿಸ್ ಆಯುಕ್ತರು, ಬೆಂಗಳೂರು ರವರು ಈ ದೂರನ್ನು ಉಪ ಪೋಲೀಸ್ ಆಯುಕ್ತರು, ವಿ.ವಿ.ಐ.ಪಿ ಭದ್ರತೆ ಬೆಂಗಳೂರು ನಗರ ರವರಿಗೆ ವಹಿಸಿ, ಕೂಲಂಕಷವಾಗಿ ವಿಚಾರಣೆ ಕೈಗೊಂಡು, ಮುಂದಿನ ಕ್ರಮದ ಬಗ್ಗೆ ವರದಿಯನ್ನು ಸಲ್ಲಿಸಲು ಸೂಚಿಸಿರುತ್ತಾರೆ. ಉಪ ಪೋಲೀಸ್ ಆಯುಕ್ತರು, ವಿವಿಐಪಿ ಭದ್ರತೆ ವಿಭಾಗದಿಂದ ವರದಿ ಬಾಕಿ ಇದ್ದು, ವರದಿಯನ್ನು ಸ್ವೀಕರಿಸಿದ ನಂತರ ಮುಂದಿನ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

---

ಹೆಚ್‌ಡಿ 78 ಪಿಸಿಇ 2023

(ಡಾ: ಜಿ.ಪರಮೇಶ್ವರ)
ಗೃಹ ಸಚಿವರು